JUNE 30, 2025

# AKASHAVANI - DHARWAD

## PRADESH SAMACHARA (KANNADA) 12.00 P.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ಕೇಂದ್ರ ಹಣಕಾಸು ಇಲಾಖೆ ಸೂಚನೆಯಂತೆ, ಉತ್ತರಕನ್ನಡ ಜಿಲ್ಲೆಯ ಎಲ್ಲ 229 ಗ್ರಾಮ ಪಂಚಾಯಿತಿಗಳಲ್ಲಿ, ನಾಳೆ ಜುಲೈ 1 ರಿಂದ ಸಪ್ಟೆಂಬರ್ 30ರ ವರೆಗೆ, ಆರ್ಥಿಕ ಸೇರ್ಪಡೆ ಯೋಜನೆಗಳ, ಶುದ್ಧತ್ವ ಅಭಿಯಾನ ಆಯೋಜಿಸಲಾಗಿದೆ. ಪ್ರಧಾನಮಂತ್ರಿ ಜೀವನ ಜ್ಯೋತಿ ವಿಮೆ, ಪ್ರಧಾನಮಂತ್ರಿ ಸುರಕ್ಷಾ ವಿಮೆ, ಅಟಲ್ ಪಿಂಚಣಿ ಯೋಜನೆ ಹಾಗೂ ಸೈಬರ್ ವಂಚನೆಗಳ ಬಗ್ಗೆ, ಜಾಗ್ರತಿ ಮತ್ತು ಬ್ಯಾಂಕ್‌ಗಳಲ್ಲಿ ಕೆ.ವಾಯ್.ಸಿ. – ನೋ ಯುವರ್ ಕಸ್ಟಮರ್ ಅಪ್‌ಡೇಶನ್‌ಗೆ ಅವಕಾಶ ಕಲ್ಪಿಸಲಾಗಿದೆ, ಎಂದು ಅಗ್ರಣಿ ಬ್ಯಾಂಕ್ ಪ್ರಬಂಧಕರು ತಿಳಿಸಿದ್ದಾರೆ.

<><><>

ಧಾರವಾಡ, ಹುಬ್ಬಳ್ಳಿ ಅವಳಿ ನಗರಗಳನ್ನು, ತ್ಯಾಜ್ಯ ಮುಕ್ತ, ಸ್ವಚ್ಛ, ಸುಂದರ, ಹಸಿರು ನಗರವಾಗಿಸಲು, ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋ ್ ಲಾಡ ಅವರು, ವಿಶೇಷ ಸ್ವಚ್ಛತಾ ಆಂದೋಲನಕ್ಕೆ ಚಾಲನೆ ನೀಡಿದ್ದಾರೆ. ಧಾರವಾಡ ನಗರದ 7 ವಾರ್ಡಗಳ, 16ಕ್ಕೂ ಹೆಚ್ಚು ಬಡಾವಣೆಗಳಲ್ಲಿ, ಎರಡು ಸಾವಿರಕ್ಕೂ ಅಧಿಕ ಜನ, ಸ್ವಚ್ಛತಾ ಅಭಿಯಾನದಲ್ಲಿ ಪಾಲ್ಗೊಂಡರು. ಜಿಲ್ಲಾಡಳಿತದ ಅಧಿಕಾರಿಗಳು, ವಿವಿಧ ಇಲಾಖೆ ಸಿಬ್ಬಂದಿ, ಸ್ವಚ್ಛತಾ ಪೌರ ಕಾರ್ಮಿಕರು, ಎನ್.ಎಸ್.ಎಸ್. ಹಾಗೂ ಎನ್.ಸಿ.ಸಿ. ಸ್ವಯಂಸೇವಕರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

<><><>

ಕನ್ನಡ ಸಾಹಿತ್ಯದ ಬೆಲೆ ಕಟ್ಟಲಾರದ ಸಂಪತ್ತು ಎಂದರೆ ಅದು ವಚನ ಸಾಹಿತ್ಯ. ಅಂಥಹ ಸಾಹಿತ್ಯವನ್ನು ಜನಮಾನಸಕ್ಕೆ ತಲುಪಿಸುವ ಕೆಲಸ, ಮತ್ತಷ್ಟು ಆಗಬೇಕಿದೆ ಎಂದು ಗದಗ, ಡಂಬಳದ ಜಗದ್ಗುರು ತೋಂಟದಾರ್ಯ ಸಂಸ್ಥಾನಮಠದ ಡಾಕ್ಟರ ತೋಂಟದ ಸಿದ್ದರಾಮ ಸ್ವಾಮೀಜಿ ಹೇಳಿದರು. ಧಾರವಾಡ ಆಕಾಶವಾಣಿ ರೂಪಿಸಿ, ಪ್ರಸ್ತುತಪಡಿಸಿದ 'ವಚನಾಮೃತ' ಕಾರ್ಯಕ್ರಮ 200 ಸಂಚಿಕೆ ಪೂರೈಸಿದ ಹಿನ್ನೆಲೆ, ಹುಬ್ಬಳ್ಳಿ ಶ್ರೀ ಗುರುಬಸವ ಮಂಟಪ ಟ್ರಸ್ಟ್, ಕರ್ನಾಟಕ ವಿಶ್ವವಿದ್ಯಾಲಯದ, ಶ್ರೀ ಬಸವೇಶ್ವರ ಪೀಠ ಹಾಗೂ ಆಕಾಶವಾಣಿ ಧಾರವಾಡ ಜಂಟಿಯಾಗಿ ಆಯೋಜಿಸಿದ್ದ ಕಾರ್ಯಕ್ರಮದ ಸಾನಿಧ್ಯವಹಿಸಿ ಅವರು ಮಾತನಾಡಿದರು.

<><><>

ಧ್ವನಿ: ಡಾ.ತೋಂಟದ ಸಿದ್ದರಾಮ ಸ್ವಾಮೀಜಿ– 37 ಸೆಕೆಂದುಗಳು

<><><>

ಇ–ಖಾತಾ ಅಭಿಯಾನದ ಮೂಲಕ ರಾಜ್ಯ ಸರ್ಕಾರವು, ಜನರ ಮನೆ ಬಾಗಿಲಿಗೆ ಆಸ್ತಿ ಖಾತೆ ದಾಖಲೆಗಳನ್ನು ತಲುಪಿಸುವ ಕೆಲಸ ಮಾಡುತ್ತಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಹೇಳಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಈ ಬಗ್ಗೆ ಮಾಹಿತಿ ಹಂಚಿಕೊಂಡಿರುವ ಅವರು, ಇ–ಖಾತಾ ಮೂಲಕ ಜನರ ಆಸ್ತಿಗಳಿಗೆ ಸರ್ಕಾರ ಗ್ಯಾರಂಟಿ ನೀಡುತ್ತದೆ ಎಂದರು.

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ತಮ್ಮ ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ, "ಕಲಬುರಗಿ ರೊಟ್ಟಿ" ಬಗ್ಗೆ ಪ್ರಸ್ತಾಪಿಸಿರುವುದು ಜಿಲ್ಲೆಗೆ ಮಾತ್ರವಲ್ಲದೆ, ಇಡಿ ರಾಜ್ಯಕ್ಕೆ ಹೆಮ್ಮೆಪಡುವ ಸಂಗತಿಯಾಗಿದೆ ಎಂದು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಹೇಳಿದ್ದಾರೆ. ಇದು ಕಲಬುರಗಿ ರೊಟ್ಟಿಯ ಜಾಗತಿಕ ಮಾರುಕಟ್ಟೆ ವಿಸ್ತರಣೆಗೂ ಸಹಕಾರಿಯಾಗಲಿದೆ ಎಂದಿದ್ದಾರೆ. ಕೃಷಿ ಇಲಾಖೆ, ಕರ್ನಾಟಕ ರೈತ ಸಮೃದ್ಧಿ ಯೋಜನೆಯಡಿ 5 ಲಕ್ಷ ರೂಪಾಯಿ ಹಾಗೂ ಸಕ್ಕರೆ ಕಾರ್ಖಾನೆಗಳಿಂದ ಸಾಮಾಜಿಕ ಹೊಣೆಗಾರಿಕೆ ನಿಧಿಯಡಿ 6 ಲಕ್ಷ ರೂಪಾಯಿ ಅನುದಾನ ಒದಗಿಸಲಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

<><><>

ಹುಬ್ಬಳ್ಳಿ ನಗರದ ಸಂಯುತಾ ಪ್ರತಿಷ್ಠಾನದ ನೇತೃತ್ವದಲ್ಲಿ, ಹವ್ಯಕ ಭವನದಲ್ಲಿ, ಹಿರಿಯ ಪತ್ರಕರ್ತ ಅರುಣ ಕುಮಾರ ಹಬ್ಬು ಅವರ 'ಬೊಗಸೆ ನೀರು', ಕೃತಿಯನ್ನು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಬಿಡುಗಡೆಗೊಳಿಸಿದರು.

<><><>

ಹಾವೇರಿ ಜಿಲ್ಲೆಯಲ್ಲಿ, ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ, ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಯನ್ನು, ತಾಲೂಕುವಾರು ಅನುಷ್ಠಾನಗೊಳಿಸಲು, ಸರ್ಕಾರ ಮಂಜೂರಾತಿ ನೀಡಿದೆ ಎಂದು, ತೋಟಗಾರಿಕೆ ಇಲಾಖೆ, ಉಪ ನಿರ್ದೇಶಕ ಸಿದ್ದರಾಮಯ್ಯ ಬರಗಿಮಠ ತಿಳಿಸಿದ್ದಾರೆ. ಬ್ಯಾಡಗಿ, ಹಾನಗಲ್, ಹಿರೇಕೆರೂರು, ರಟ್ಟೀಹಳ್ಳಿ ಹಾಗೂ ಶಿಗ್ಗಾವಿ ತಾಲೂಕುಗಳಲ್ಲಿ ಅಡಕೆ, ಶುಂಠಿ, ಮಾವು ಮತ್ತು ಹಸಿ ಮೆಣಸಿನಕಾಯಿ ಬೆಳೆ, ಹಾವೇರಿ, ಸವಣೂರು, ರಾಣೆಬೆನ್ನೂರು ತಾಲೂಕುಗಳಲ್ಲಿ, ಹಸಿ ಮೆಣಸಿಕಾಯಿ, ಮಾವು ಬೆಳೆಗಳಿಗೆ, ವಿಮೆ ಅನುಷ್ಠಾನಗೊಳಿಸಲಾಗುತ್ತಿದೆ. ಜುಲೈ 31, ವಿಮೆ ಕಂತು ಪಾವತಿಸಲು, ಕೊನೆ ದಿನವಾಗಿದೆ.

<><><>

ವೃಕ್ಷಮಾತೆ, ನಾಡೋಜ ಪದ್ಮಶ್ರೀ, ಸಾಲುಮರದ ತಿಮ್ಮಕ್ಕ ಅವರ ಜನ್ಮ ದಿನವಾದ ಇಂದು, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಶುಭಾಶಯಗಳನ್ನು ಕೋರಿದ್ದಾರೆ. ಕೈಗಾರಿಕೆ ಖಾತೆ ಸಚಿವ ಎಂ.ಬಿ ಪಾಟೀಲ, ತಮ್ಮ ಎಕ್ಸ್ ಖಾತೆ ಮೂಲಕ ತಿಮ್ಮಕ್ಕ ಅವರಿಗೆ ಜನ್ಮ ದಿನದ ಶುಭಾಶಯಗಳನ್ನು ತಿಳಿಸಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.

<><><>